# ತುಮಕೂರು ವಿಶ್ವವಿದ್ಯಾನಿಲಯ

ಬಿ.ಹೆಚ್ ರಸ್ತೆ, ತುಮಕೂರು – 572 103, ದೂರವಾಣಿ ಸಂಖ್ಯೆ : 0816–2254546


**ಸಂಖ್ಯೆ:ತುವಿ:ಸಾಂ.ಕಾ:2023–24** | 2174 **ದಿನಾಂಕ:15.09.2023**

## : ಸುತ್ತೋಲೆ :

ವಿಷಯ: "ಬಾಪೂಜಿ ಪ್ರಬಂಧ ಸ್ಪರ್ಧೆ" ಆಯೋಜನೆ ಕುರಿತು.

ಉಲ್ಲೇಖ: ತುಮಕೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪತ್ರ ದಿನಾಂಕ:14.09.2023

*****

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮ ಗಾಂಧೀಜಿ ಅವರ 154ನೇ ಜಯಂತಿ ಅಂಗವಾಗಿ ಪದವಿ–ಸ್ನಾತಕೋತ್ತರ ಪದವಿ ವಿಭಾಗಗಳಿಗೆ ಜಿಲ್ಲಾ ಮತ್ತು ರಾಜ್ಯಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗುತ್ತಿದೆ. (ಪ್ರತಿ ಲಗತ್ತಿಸಿದೆ)

ಉಲ್ಲೇಖಿತ ಪತ್ರದಲ್ಲಿನ ನಿರ್ದೇಶನದಂತೆ ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಸ್ನಾತಕ/ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳಿಗೆ **"ಬಾಪೂಜಿ ಪ್ರಬಂಧ ಸ್ಪರ್ಧೆ"** ಯನ್ನು ಆಯೋಜಿಸಿ ತಲಾ ಅತ್ಯುತ್ತಮ 3 ಪ್ರಬಂಧಗಳನ್ನು ದಿನಾಂಕ:26.09.2023 ರೊಳಗಾಗಿ "ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬಾಳನ ಕಟ್ಟೆ, ಡಾ. ಗುಬ್ಬಿವೀರಣ ಕಲಾಕ್ಷೇತ್ರದ ಹತ್ತಿರ, ತುಮಕೂರು–572101 ವಿಳಾಸಕ್ಕೆ ಕಳುಹಿಸಿಕೊಡುವಂತೆ ತಿಳಿಸಲಾಗಿದೆ.

**ಆದೇಶದ ಮೇರೆಗೆ**

Mangalahowri M

**ಉಪಕುಲಸಚಿವರು**

**ಅಭಿವೃದ್ಧಿ ವಿಭಾಗ**

**ತುಮಕೂರು ವಿಶ್ವವಿದ್ಯಾನಿಲಯ**

**ತುಮಕೂರು**

**ಗೆ,**

**ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

ಪ್ರತಿಗಳು:

1. ವಿಶೇಷಾಧಿಕಾರಿಗಳು, ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ.
2. ಸಿಸ್ಟಂ ಅನಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಚೇರಿ ಪ್ರತಿ.

ಸಿಆರ್

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಸಂಖ್ಯೆ: ಹಿಸನಿ/ತುಮ/2023-24/ 104-05 ದಿನಾಂಕ:14-9-2023.

ಗೆ,

ಮಾನ್ಯ ಕುಲಸಚಿವರು,
ತುಮಕೂರು ವಿಶ್ವವಿದ್ಯಾನಿಲಯ,
ತುಮಕೂರು.

ಮಾನ್ಯರೇ,

ವಿಷಯ: "ಬಾಪೂಜಿ ಪ್ರಬಂಧ ಸ್ಪರ್ಧೆ"ಗೆ ಅತ್ಯುತ್ತಮವಾದ ಆಯ್ದ 3 ಪ್ರಬಂಧಗಳನ್ನು ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗಗಳಿಂದ ಸಂಗ್ರಹಿಸಿ 26-9-2023ರೊಳಗಾಗಿ ವಾರ್ತಾ ಇಲಾಖೆಗೆ ಕಳುಹಿಸುವ ಕುರಿತು.

ಉಲ್ಲೇಖ:- ಕೇಂದ್ರ ಕಚೇರಿ ಪತ್ರ ಸಂಖ್ಯೆ:ವಾಸಾಸಂ/ಇಎಂಎಂ/ಇ8 ಗಸೇಪ್ರ/2023-24/1830-15 ದಿ.13-9-2023.

*************

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮ ಗಾಂಧೀಜಿ ಅವರ 154ನೇ ಜಯಂತಿ ಅಂಗವಾಗಿ, ಪ್ರೌಢಶಾಲೆ ವಿಭಾಗ/ಪದವಿಪೂರ್ವ ಶಿಕ್ಷಣ ವಿಭಾಗ ಹಾಗೂ ಪದವಿ-ಸ್ನಾತಕೋತ್ತರ ಪದವಿ ವಿಭಾಗ ಹೀಗೆ 3 ಪ್ರತ್ಯೇಕ ವಿಭಾಗಗಳಲ್ಲಿ ಜಿಲ್ಲಾ ಮತ್ತು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಪ್ರತಿ ವಿಭಾಗಗಳಿಂದ ಆಯ್ಕೆಯಾಗುವ 3 ಅತ್ಯುತ್ತಮ ಪ್ರಬಂಧಗಳಿಗೆ ಜಿಲ್ಲಾ ಮಟ್ಟದಲ್ಲಿ "ಮಹಾತ್ಮಗಾಂಧಿ ಜಯಂತಿ" ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡುವುದರ ಜೊತೆಗೆ ಆ ಪ್ರಬಂಧಗಳನ್ನು ರಾಜ್ಯ ಮಟ್ಟದ ಸ್ಪರ್ಧೆಗೂ ಕೂಡ ಕಳುಹಿಸಲಾಗುತ್ತದೆ.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ಸಮಿತಿಯು ಪ್ರಬಂಧಗಳನ್ನು ಆಯ್ಕೆ ಮಾಡಲಿದೆ. ಪ್ರಬಂಧ ಸ್ಪರ್ಧೆಯ ವಿಷಯ, ಆಯ್ಕೆ ವಿಧಾನ, ಪ್ರಬಂಧ ರಚನೆ, ಮಾರ್ಗಸೂಚಿ ಹಾಗೂ ಬಹುಮಾನಗಳ ಕುರಿತು ವಿವಿರವಾದ ಮಾಹಿತಿಯನ್ನು ಪ್ರತ್ಯೇಕವಾಗಿ ಈ ಪತ್ರದ ಜೊತೆ ಲಗತ್ತಿಸಲಾಗಿದೆ.

<u>**ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ:-**</u>

1) ದೇಶ ನಿರ್ಮಾಣದಲ್ಲಿ ಗಾಂಧೀಜಿ ಅವರ ಜಾತ್ಯಾತೀತ ನಿಲುವುಗಳು.
2) ಗಾಂಧೀಜಿ ಅವರ ಧಾರ್ಮಿಕ ಸಹಿಷ್ಣುತೆ, ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು.
3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ.
4) ಗಾಂಧೀಜಿ ಅವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು.

14/9/23

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

<u>**ಬಹುಮಾನಗಳ ವಿವರ:-**</u>

ಪ್ರೌಢಶಾಲಾ/ ಪದವಿಪೂರ್ವ/ ಕಾಲೇಜು ಹಾಗೂ ಸ್ನಾತಕೋತ್ತರ 3 ಪ್ರತ್ಯೇಕ ವಿಭಾಗಗಳ ಪ್ರಬಂಧ ಸ್ಪರ್ಧೆ ವಿಜೇತರಿಗೆ

- ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ – 3,000/- , ದ್ವಿತೀಯ ಸ್ಥಾನಕ್ಕೆ-2,000/-, ತೃತೀಯ ಸ್ಥಾನಕ್ಕೆ – 1,000/-
- ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 31,000/- ದ್ವಿತೀಯ ಸ್ಥಾನಕ್ಕೆ – 21,000/-, ತೃತೀಯ ಸ್ಥಾನಕ್ಕೆ – 11,000/- ರೂ.

**ಪ್ರಬಂಧ ರಚಿಸಲು ಮಾರ್ಗಸೂಚಿಗಳು :-**

1) ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು.
2) ಶುದ್ಧ ಕೈಬರಹ ಅಥವಾ ನುಡಿ ಇಲ್ಲವೆ ಯೂನಿಕೋಡ್ ತಂತ್ರಾಂಶದಲ್ಲಿ ಬೆರಳಚ್ಚು ಮಾಡಿರಬೇಕು.
3) ಆಕಾರವಾಗಿ ಬಳಸಿದ ಪರಾಮರ್ಶನ/ ಆಧಾರ ಗ್ರಂಥಗಳ ವಿವರವನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು.
4) ಪ್ರಬಂಧಕಾರರ ಹೆಸರು ವಿಳಾಸ ನಮೂದಿಸಬೇಕು.
5) ಶಾಲೆ/ಕಾಲೇಜುಗಳು ಹಾಗೂ ಸಂಬಂಧಿಸಿದ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರ ಮೂಲಕವೇ ಜಿಲ್ಲಾ ವಾರ್ತಾಧಿಕಾರಿಗಳಿಗೆ ಪ್ರಬಂಧವನ್ನು ತಲುಪಿಸಬೇಕು.
6) ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು.
7) ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ವಿದ್ಯಾರ್ಥಿಗಳು ತಾವು ರಚಿಸಿದ ಪ್ರಬಂಧಗಳನ್ನು ತುಮಕೂರು ಜಿಲ್ಲಾ ವ್ಯಾಪ್ತಿಯ ಪದವಿ ಕಾಲೇಜುಗಳ ಪ್ರಾಚಾರ್ಯರು ಮತ್ತು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರಿಗೆ ಗುರುತಿನ ಚೀಟಿ ಹಾಗೂ ಸಂಪರ್ಕ ವಿವರಗಳನ್ನು ಲಗತ್ತಿಸಿ ಸಲ್ಲಿಸಬೇಕು. ಪ್ರತಿ ಶಾಲೆ/ ಕಾಲೇಜು/ಸ್ನಾತಕೋತ್ತರ ಪದವಿ ವಿಭಾಗಗಳ ಮುಖ್ಯಸ್ಥರು ಅವುಗಳನ್ನು ಆಯ್ದು ಅತ್ಯುತ್ತಮವಾದ 3 ಪ್ರಬಂಧಗಳನ್ನು ದಿನಾಂಕ: 26-9-2023ರೊಳಗಾಗಿ "ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬಾಳನ ಕಟ್ಟೆ, ಡಾ: ಗುಬ್ಬಿವೀರಣ್ಣ ಕಲಾಕ್ಷೇತ್ರದ ಹತ್ತಿರ, ತುಮಕೂರು-572101 ಈ ವಿಳಾಸಕ್ಕೆ ಕಳುಹಿಸಬೇಕು.

ಸಮಯಾವಕಾಶ ಕಡಿಮೆ ಇರುವುದರಿಂದ ಕೂಡಲೇ ತುಮಕೂರು ಜಿಲ್ಲಾ ವ್ಯಾಪ್ತಿಯ ಎಲ್ಲಾ ಪದವಿ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳಿಗೆ ಸುತ್ತೋಲೆಯನ್ನು ಕಳುಹಿಸುವ ಮೂಲಕ ನಿಗಧಿತ ಅವಧಿಯಲ್ಲಿ ಪ್ರಬಂಧವನ್ನು ಕಳುಹಿಸಿಕೊಡಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಮ್ಮಲ್ಲಿ ಕೋರುತ್ತೇನೆ. (ಈ ಪತ್ರದೊಂದಿಗೆ ವಾರ್ತಾ ಇಲಾಖೆಯ ಕೇಂದ್ರ ಕಚೇರಿಯ ಸುತ್ತೋಲೆ ಲಗತ್ತಿಸಿದೆ).

ತಮ್ಮ ವಿಶ್ವಾಸಿ,

(ಮಮತ ಎಂ.ಆರ್.)
ಹಿರಿಯ ಸಹಾಯಕ ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ತುಮಕೂರು.

ಅತೀ ಜರೂರು

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

"ವಾರ್ತಾ ಸೌಧ", ಸಂ: 17, ಭಗವಾನ್ ಮಹಾವೀರ ರಸ್ತೆ (ಇನ್ ಫೆಂಟ್ರಿ ರಸ್ತೆ), ಬೆಂಗಳೂರು-560 001.

ಸಂ: ವಾಸಾಸಂ/ಇಎಂಎಂ/ಇ8/ಗ್ರಂಸೇಪ್ರ-ಪ್ರಸ್ಪರ್ಧೆ/2023-24/ ದಿನಾಂಕ: 13-09-2023.

## ಸುತ್ತೋಲೆ

ವಿಷಯ : ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಜಿಲ್ಲಾ ಮಟ್ಟದಲ್ಲಿ ಆಯೋಜಿಸುವ ಬಗ್ಗೆ.

ಉಲ್ಲೇಖ : ದಿನಾಂಕ : 11-09-2023 ರ ಸರ್ಕಾರದ ಆದೇಶ ಸಂಖ್ಯೆ : ಕಸಿಇ-ವಿಪಿಪಿ/27/2023.

***********

ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಆಚರಿಸುತ್ತಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 154ನೇ ಜಯಂತಿಯ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ / ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳುವ ಬಗ್ಗೆ ಪ್ರಕಟಣೆಯನ್ನು ಹೊರಡಿಸಿಕೊಂಡು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ವಾರ್ತಾಧಿಕಾರಿಗಳು ಇರುವ ಸಮಿತಿಯನ್ನು ರಚಿಸಿಕೊಂಡು ಆ ಮುಖಾಂತರ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಮಹಾತ್ಮ ಗಾಂಧೀಜಿಯವರು ವಿಶ್ವದ ಸಾಧಕ ಅಗ್ರಗಣ್ಯರಲ್ಲಿ ಪ್ರಮುಖರು. ಇಡೀ ಜಗತ್ತೇ ನಿಬ್ಬೆರಗಾಗುವಂತೆ ಇನ್ನೊಬ್ಬರಿಗಾಗಿ ಬದುಕನ್ನು ಸವೆಸಿದ ಗಾಂಧೀಜಿಯವರನ್ನು ಹಾಗೂ ಅವರ ವಿಚಾರಗಳನ್ನು ಹೊಸ ಪೀಳಿಗೆಗೆ ಪರಿಚಯಿಸುವುದು, ದಾಟಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ಮಹಾತ್ಮ ಗಾಂಧೀಜಿಯವರ 154 ನೇ ಜಯಂತಿಯು ಬರುವ 2023 ರ ಅಕ್ಟೋಬರ್ 02 ರಂದು ಆಚರಿಸಲ್ಪಡಲಿದೆ. ಈ ಸಂದರ್ಭದಲ್ಲಿ ವಿದ್ಯಾರ್ಥಿ, ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಲಾಗಿದೆ.

I) ಪ್ರೌಢ ಶಾಲಾ ವಿಭಾಗ :-

1. ನನಗೇಕೆ ಗಾಂಧೀಜಿ ಇಷ್ಟವಾಗುತ್ತಾರೆ.
2. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ.
3. ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ.

ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು ೯೦೦ ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

II) ಪದವಿ ಪೂರ್ವ ಶಿಕ್ಷಣ ವಿಭಾಗ :-

1. ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವ ಗಾಂಧೀಜಿಯವರ ಪ್ರಯೋಗಗಳು.
2. ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ.
3. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ.

ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು ೧೫೦೦ ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

III) ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ :-

1. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು.
2. ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು.
3. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ.
4. ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

ಎಲ್ಲಾ ವಿಭಾಗಗಳ ವಿದ್ಯಾರ್ಥಿಗಳು ತಾವು ರಚಿಸಿದ ಪ್ರಬಂಧಗಳನ್ನು ತಮ್ಮ ಸಂಸ್ಥೆಗಳ ಮುಖ್ಯಸ್ಥರಿಗೆ ಗುರುತಿನ ಚೀಟಿ ಹಾಗೂ ಸಂಪರ್ಕ ವಿವರಗಳನ್ನು ಲಗತ್ತಿಸಿ ಸಲ್ಲಿಸಬೇಕು. ಪ್ರತಿ ಶಾಲೆ / ಕಾಲೇಜು / ಸ್ನಾತಕೋತ್ತರ ಪದವಿ ವಿಭಾಗಗಳ ಮುಖ್ಯಸ್ಥರು ಅವುಗಳನ್ನು ಆಯ್ದು ಅತ್ಯುತ್ತಮವಾದ ಮೂರು ಪ್ರಬಂಧಗಳನ್ನು ದಿನಾಂಕ : 26-09-2023 ರೊಳಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಿಲ್ಲಾ ಕಚೇರಿಗಳಿಗೆ ತಲುಪಿಸಬೇಕು.

ಪ್ರತಿಯೊಂದು ಶಾಲೆ / ಕಾಲೇಜುಗಳಿಂದ ಸ್ವೀಕೃತವಾದ ಪ್ರಬಂಧಗಳನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಗಾಂಧಿ ವಿಚಾರಗಳ ತಜ್ಞರುಗಳು ಹಾಗೂ ಜಿಲ್ಲಾ ವಾರ್ತಾಧಿಕಾರಿಗಳು ಇರುವ ಸಮಿತಿಯನ್ನು ರಚಿಸಿಕೊಂಡು, ಪರಿಶೀಲಿಸಿ ಅವುಗಳಲ್ಲಿ ಅತ್ಯುತ್ತಮವೆನಿಸಿದ ಪ್ರತಿ ವಿಭಾಗದಲ್ಲಿನ ಮೂರು (3) ಪ್ರಬಂಧಗಳನ್ನು ಆಯ್ಕೆ ಮಾಡಿ ದಿನಾಂಕ : 29-09-2023 ರೊಳಗೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು, ಇವರಿಗೆ ಸಲ್ಲಿಸಬೇಕು. ಅವುಗಳಲ್ಲಿ ಅತ್ಯುತ್ತಮವಾದ ಪ್ರಬಂಧಗಳನ್ನು ರಾಜ್ಯಮಟ್ಟದ ಬಹುಮಾನಕ್ಕೆ ಆಯ್ಕೆ ಮಾಡಲಾಗುವುದು.

-3-

ಪ್ರತಿ ವಿಭಾಗದಲ್ಲಿನ ಅತ್ಯುತ್ತಮವಾದ ಮೂರು (3) ಪ್ರಬಂಧಗಳಿಗೆ ಅಕ್ಟೋಬರ್ 02 ರಂದು ಗಾಂಧೀ ಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ, ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುವುದು.

**ಪ್ರಬಂಧ ರಚಿಸಲು ಮಾರ್ಗಸೂಚಿಗಳು :-**

- ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು.
- ಶುದ್ಧ ಕೈಬರಹ ಅಥವಾ ನುಡಿ ಇಲ್ಲವೇ ಯೂನಿಕೋಡ್ ತಂತ್ರಾಂಶದಲ್ಲಿ ಬೆರಳಚ್ಚು ಮಾಡಿರಬೇಕು.
- ಆಕರವಾಗಿ ಬಳಸಿದ ಪರಾಮರ್ಶನ / ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು.
- ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು.
- ಶಾಲೆ / ಕಾಲೇಜುಗಳ ಮುಖ್ಯಸ್ಥರುಗಳ ಮೂಲಕವೇ ಜಿಲ್ಲಾ ವಾರ್ತಾಧಿಕಾರಿಗಳಿಗೆ ಪ್ರಬಂಧಗಳನ್ನು ತಲುಪಿಸಬೇಕು.
- ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು.
- ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ಬಹುಮಾನಗಳ ವಿವರ :

ಪ್ರೌಢಶಾಲಾ / ಪದವಿ ಪೂರ್ವ / ಕಾಲೇಜು ಹಾಗೂ ಸ್ನಾತಕೋತ್ತರ ಮೂರು ಪ್ರತ್ಯೇಕ ವಿಭಾಗಗಳ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ :-

ಜಿಲ್ಲಾಮಟ್ಟದಲ್ಲಿ : ಪ್ರಥಮ ಸ್ಥಾನಕ್ಕೆ ರೂ.3,000/-
ದ್ವಿತೀಯ ಸ್ಥಾನಕ್ಕೆ ರೂ.2,000/-
ತೃತೀಯ ಸ್ಥಾನಕ್ಕೆ ರೂ. 1,000/-
ರಾಜ್ಯಮಟ್ಟದಲ್ಲಿ : ಪ್ರಥಮ ಸ್ಥಾನಕ್ಕೆ ರೂ.31,000/-
ದ್ವಿತೀಯ ಸ್ಥಾನಕ್ಕೆ ರೂ.21,000/-
ತೃತೀಯ ಸ್ಥಾನಕ್ಕೆ ರೂ. 11,000/-

ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ವಿವರ :

ಅಕ್ಟೋಬರ್ 02, 2023 ರಂದು ಜಿಲ್ಲಾಡಳಿತದ ಸಹಯೋಗದಲ್ಲಿ ಶ್ರಮದಾನ, ಸರ್ವಧರ್ಮ ಪ್ರಾರ್ಥನೆ, ಗಾಂಧೀಜಿಯವರ ಪ್ರಿಯ ಭಜನೆಗಳು, ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿ ವಸ್ತು ಬಳಕೆ, ಮತ್ತಿತರ ವಿಷಯಗಳ ಕುರಿತು ಉಪನ್ಯಾಸ ಹಾಗೂ ಪ್ರಬಂಧ ಸ್ಪರ್ಧೆ ವಿಜೇತರಿಗೆ ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲು ಪ್ರತಿ ಜಿಲ್ಲೆಗೆ ರೂ.30,000/- ಗಳಂತೆ ಹಾಗೂ ಪ್ರತಿ ಜಿಲ್ಲೆಯಲ್ಲಿ ಮೂರು ವಿಭಾಗಗಳ ವಿಜೇತರಿಗೆ ನಗದು ಬಹುಮಾನ ನೀಡಲು ತಲಾ ರೂ.18,000/- ಗಳಂತೆ ರಾಜ್ಯದ 31 ಜಿಲ್ಲೆಗಳಿಗೆ ಅನುದಾನವನ್ನು ಒದಗಿಸಲಾಗುವುದು. ಜಿಲ್ಲಾ ಮಟ್ಟದ ಅಧಿಕಾರಿಗಳು ಈ ನಿಟ್ಟಿನಲ್ಲಿ ತ್ವರಿತವಾಗಿ ಕಾರ್ಯ ಪ್ರವೃತ್ತರಾಗಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಮ್ಮಿಕೊಂಡು ಯಶಸ್ವಿಗೊಳಿಸಿ ಅನುಪಾಲನಾ ವರದಿಯನ್ನು ಕೇಂದ್ರ ಕಚೇರಿಗೆ ಕಳುಹಿಸಲು ಸೂಚಿಸಿದೆ

ಸದರಿ ಅನುದಾನವನ್ನು 2023-2024ನೇ ಸಾಲಿನ 2220-60-001-0-01 ನಿರ್ದೇಶನ ಮತ್ತು ಆಡಳಿತ-059 ಇತರೆ ಖರ್ಚು (ಯೋಜನೆ) ಲೆಕ್ಕಶೀರ್ಷಿಕೆಯಡಿ ಪ್ರತ್ಯಾಯೋಜಿಸಿದ ಅನುದಾನದಲ್ಲಿ ಭರಿಸಲು ಮಂಜೂರಾತಿ ನೀಡಿದೆ.

(ಹೇಮಂತ್ ಎಂ. ನಿಂಬಾಳ್ಕರ್, ಐ.ಪಿ.ಎಸ್)
ಆಯುಕ್ತರು

ಗೆ,

1. ಉಪ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಳಗಾವಿ : ಬೆಂಗಳೂರು ಗ್ರಾಮಾಂತರ : ಬೆಂಗಳೂರು ನಗರ : ಕಲಬುರಗಿ : ಮೈಸೂರು
2. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಾಮರಾಜನಗರ : ಚಿಕ್ಕಬಳ್ಳಾಪುರ : ಚಿಕ್ಕಮಗಳೂರು : ದಕ್ಷಿಣ ಕನ್ನಡ : ದಾವಣಗೆರೆ : ಧಾರವಾಡ : ಹಾಸನ : ಕೋಲಾರ : ರಾಮನಗರ : ರಾಯಚೂರು : ಶಿವಮೊಗ್ಗ : ತುಮಕೂರು : ಯಾದಗಿರಿ
3. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬಾಗಲಕೋಟೆ : ಬಳ್ಳಾರಿ : ಬೀದರ್ : ಚಿತ್ರದುರ್ಗ : ಗದಗ : ಹಾವೇರಿ : ಕೊಡಗು : ಕೊಪ್ಪಳ : ಮಂಡ್ಯ : ಉಡುಪಿ : ಉತ್ತರ ಕನ್ನಡ : ವಿಜಯಪುರ : ವಿಜಯನಗರ.
4. ಕಚೇರಿ ಪ್ರತಿ.